# Visvesvaraya Technological University

**"Jnana Sangama"**

**Belagavi - 590 018, Karnataka State**

**Dr. Satish Annigeri**
**REGISTRAR(I/C)**

**Phone : (0831) 2498100**
**Fax : (0831) 2405467**


**Ref: VTU/BGM/Aca-OS/Gen-Cir/2018-19/ 11037** **Date : 14 MAR 2019**

## ಸುತ್ತೋಲೆ

ವಿಷಯ : ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ಖಾಸಗಿ ಕಾಲೇಜು/ ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜು/ಉನ್ನತ ಶಿಕ್ಷಣ ವ್ಯಾಪ್ತಿಯ ವಿಶ್ವವಿದ್ಯಾಲಯಗಳಲ್ಲಿ ಇರುವ ತಾರತಮ್ಯ ಹಾಗೂ ನ್ಯೂನತೆಗಳನ್ನು ಹೋಗಲಾಡಿಸುವ ಕುರಿತು

ಉಲ್ಲೇಖ: ಸರ್ಕಾರಿ ಸುತ್ತೋಲೆ ಇಡಿ ೫೧೬ ಯುಎನ್‌ಸಿ ೨೦೧೫ ದಿ: ೨೬-೦೨-೨೦೧೯

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಸುತ್ತೋಲೆ ಇಡಿ ೫೧೬ ಯುಎನ್‌ಸಿ ೨೦೧೫ ದಿ: ೨೬-೦೨-೨೦೧೯ ಯನ್ನು ಲಗತ್ತಿಸಲಾಗಿದೆ. ಕಾರಣ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲ ಕಾಲೇಜುಗಳು ಸದರಿ ಸರ್ಕಾರಿ ಸುತ್ತೋಲೆಯಲ್ಲಿ ನಮೂದಿಸಿದ ಅಂಶಗಳಂತೆ ಕಡ್ಡಾಯವಾಗಿ ಪರಿಪಾಲನೆ ಮಾಡಲು ಕ್ರಮವಹಿಸಲು ಈ ಮೂಲಕ ತಿಳಿಸಲಾಗಿದೆ.

**ಅಡಕ: ಮೇಲಿನಂತೆ**

Annigeri
**ಕುಲಸಚಿವರು**
**ವಿ.ತಾ.ವಿ. ಬೆಳಗಾವಿ**

13/3/19

**ಇವರಿಗೆ,**

೧. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ಅಧೀನ ಮಹಾವಿದ್ಯಾಲಯಗಳ (ಸಂಯೋಜಿತ, ಸ್ವಾಯತ್ತ ಹಾಗೂ ಘಟಕ) ಪ್ರಾಂಶುಪಾಲರಿಗೆ
೨. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ಸ್ನಾತಕೋತ್ತರ ವಿಭಾಗಗಳ ಸಂಯೋಜನಾಧಿಕಾರಿಗಳು
೩. ಎಸ್.ಸಿ/ಎಸ್.ಟಿ ಘಟಕ , ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ

**ಪ್ರತಿ ಮಾಹಿತಿಗಾಗಿ:**

೧. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧
೨. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-೧), ಬಹು ಮಹಡಿ ಕಟ್ಟಡ, ಬೆಂಗಳೂರು – ೫೬೦ ೦೦೧
೩. ಕುಲಪತಿಗಳ ಕಾರ್ಯದರ್ಶಿಗಳು, ವಿತಾವಿ, ಬೆಳಗಾವಿ
೪. ಸಿಎನ್‌ಸಿ ಘಟಕವಿತಾವಿ, ಬೆಳಗಾವಿ

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 516 ಯುಎನ್ಇ 2015

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 27.02.2019.

**ಸುತ್ತೋಲೆ**

ವಿಷಯ: ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳಿಗೆ ಖಾಸಗಿ ಕಾಲೇಜು/ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜು/ಉನ್ನತ ಶಿಕ್ಷಣ ವ್ಯಾಪ್ತಿಯ ವಿಶ್ವವಿದ್ಯಾಲಯಗಳಲ್ಲಿ ಇರುವ ತಾರತಮ್ಯ ಹಾಗೂ ನ್ಯೂನತೆಗಳನ್ನು ಹೋಗಲಾಡಿಸುವ ಕುರಿತು.

*****

ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು (ಒಂದನೇ ವರದಿ)ಯ ಖಂಡಿಕೆ-5.9ರಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ವಿದ್ಯಾರ್ಥಿಗಳಿಗೆ ಖಾಸಗಿ ವಿಶ್ವವಿದ್ಯಾಲಯಗಳಲ್ಲಿ/ಖಾಸಗಿ/ಸರ್ಕಾರಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜುಗಳಲ್ಲಿ Campus Selection ನಡೆಸದೆ ಇರುವುದು. ಕೇವಲ ವಿದ್ಯಾರ್ಥಿಗಳನ್ನು ಪ್ರವೇಶ ಮಾಡಿಸಿಕೊಂಡು, ಪರೀಕ್ಷೆ ನಡೆಸಿ ಅಂಕಪಟ್ಟಿ/ಪದವಿ ಪ್ರಮಾಣ ಪತ್ರಗಳನ್ನು ನೀಡುವ ಅಭ್ಯಾಸ ಬೆಳೆದಿರುವುದು. ಇದರಿಂದಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕುಂಠಿತವಾಗಿ ರಾಜ್ಯದಿಂದ ಹೆಚ್ಚಿನ ಸಂಖ್ಯೆಯಲ್ಲಿ IAS/IPS/IFS ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಲು ಗುಣಮಟ್ಟದ ತರಬೇತಿ ಕಲ್ಪಿಸದೆ ಇರುವುದು, ಹಾಗೂ ಈ ಜನಾಂಗದ ವಿದ್ಯಾರ್ಥಿಗಳು ಪಿ.ಹೆಚ್.ಡಿ. ಮಾಡುವ ಸಂದರ್ಭದಲ್ಲೂ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಸಮಿತಿಯು ತುಂಬಾ ವಿಷಾದ ವ್ಯಕ್ತಪಡಿಸಿದೆ.

ಖಾಸಗಿ ವಿಶ್ವವಿದ್ಯಾಲಯಗಳ/ಖಾಸಗಿ ಕಾಲೇಜುಗಳ ಶಿಕ್ಷಣ ಗುಣಮಟ್ಟಕ್ಕೂ ಸರ್ಕಾರಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜುಗಳ ಶಿಕ್ಷಣ ಗುಣಮಟ್ಟಕ್ಕೂ ತುಂಬಾ ವ್ಯತ್ಯಾಸ ಉಂಟಾಗಿರುವುದು ಮನಗಂಡು ಈ ಜನಾಂಗದ ವಿದ್ಯಾರ್ಥಿಗಳಿಗೆ ಹೆಚ್ಚಿನ ಶೈಕ್ಷಣಿಕ ತರಬೇತಿ ಹಾಗೂ ಹೆಚ್ಚು ಅಂಕಗಳನ್ನು ಪಡೆಯಲು ಸಹಕಾರಿಯಾಗುವಂತಹ ಕಾರ್ಯಾಗಾರವನ್ನು ಏರ್ಪಡಿಸುವುದು ಸೂಕ್ತವೆಂದು ಅಭಿಪ್ರಾಯಿಸುತ್ತಾ, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು (ಒಂದನೇ ವರದಿ)ಯ ಖಂಡಿಕೆ-5.10ರ ಶಿಫಾರಸ್ಸು ಮಾಡಿರುವಂತೆ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ವಿದ್ಯಾರ್ಥಿಗಳಿಗೆ ಖಾಸಗಿ ಕಾಲೇಜು/ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜು/ಉನ್ನತ ಶಿಕ್ಷಣ ವ್ಯಾಪ್ತಿಯ ವಿಶ್ವವಿದ್ಯಾಲಯಗಳು ಈ ಕೆಳಗೆ ನಮೂದಿಸಿರುವ ಅಂಶಗಳಂತೆ ಕಡ್ಡಾಯವಾಗಿ ಪರಿಪಾಲನೆ ಮಾಡಲು ಕ್ರಮವಹಿಸತಕ್ಕದ್ದು.

- ಖಾಸಗಿ ವಿಶ್ವವಿದ್ಯಾಲಯ/ಖಾಸಗಿ ಕಾಲೇಜುಗಳ Campus Selection ಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡುವುದು.
- ಪ್ರತ್ಯೇಕವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಜರುಗಿಸಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವುದು.
- ಸರ್ಕಾರಿ ವಿಶ್ವವಿದ್ಯಾಲಯ/ಸರ್ಕಾರಿ ಕಾಲೇಜುಗಳಲ್ಲಿ Campus Selection ಏರ್ಪಡಿಸುವುದು.
- ವಿದ್ಯಾರ್ಥಿಗಳು IAS/IPS/IFS ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಹೆಚ್ಚಿನ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳುವುದು.
- ವಿದ್ಯಾರ್ಥಿಗಳಿಗೆ ಉದ್ದೇಶ ಪೂರ್ವಕವಾಗಿ ಕಡಿಮೆ ಅಂಕ ನೀಡುವ ಅಭ್ಯಾಸ ಇದ್ದು, ವಿದ್ಯಾರ್ಥಿಗಳ ಅರ್ಹತೆಗೆ ಅನುಸಾರವಾಗಿ ಅಂಕಗಳನ್ನು ಕೊಡುವ ಮೂಲಕ ಪ್ರೋತ್ಸಾಹಿಸುವುದು.
- ವಿದ್ಯಾರ್ಥಿಗಳು ಪಿಹೆಚ್‌ಡಿ ಮಾಡುವ ಸಂದರ್ಭದಲ್ಲಿ ಉದ್ದೇಶ ಪೂರ್ವಕವಾಗಿ ವಿಳಂಬ ಮಾಡಿ ತೊಂದರೆ ನೀಡುವುದನ್ನು ತಡೆಗಟ್ಟಿ ನಿಗಧಿತ ಅವಧಿಯಲ್ಲಿ ಪಿಹೆಚ್‌ಡಿ ಪೂರ್ಣಗೊಳಿಸಲು ಕ್ರಮವಹಿಸುವುದು.

ತಮ್ಮ ನಂಬುಗೆಯ,

(ಎನ್. ಪಿ. ಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-I).

ಇವರಿಗೆ:

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ-577 451.
5. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ – 585 106.

6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
8. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570 006.
10. ಕುಲಸಚಿವರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ-586 101.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
16. ಕುಲಸಚಿವರು, ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.
19. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.
20. ನಿರ್ದೇಶಕರು, ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಸಂಸ್ಥೆ, ನಾಗರಬಾವಿ, ಬೆಂಗಳೂರು.
21. ನಿರ್ದೇಶಕರು, ಸೆಂಟರ್ ಫಾರ್ ಮಲ್ಟಿ-ಡಿಸಿಪ್ಲಿನರಿ ಡೆವಲಪ್‌ಮೆಂಟ್ ರಿಸರ್ಚ್, ಧಾರವಾಡ.
22. ಅಲಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು
23. ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು
24. ಸಿ.ಎಂ.ಆರ್.ವಿಶ್ವವಿದ್ಯಾಲಯ, ಬೆಂಗಳೂರು
25. ರೇವಾ ವಿಶ್ವವಿದ್ಯಾಲಯ, ಬೆಂಗಳೂರು
26. ಪಿ.ಇ.ಎಸ್. ಶಿಕ್ಷಣ ಸಂಸ್ಥೆಗಳು, ಬೆಂಗಳೂರು
27. ಎಂ.ಎಸ್.ರಾಮಯ್ಯ ವಿಶ್ವವಿದ್ಯಾಲಯ, ಬೆಂಗಳೂರು
28. ದಯಾನಂದ ಸಾಗರ್ ವಿಶ್ವವಿದ್ಯಾಲಯ, ಬೆಂಗಳೂರು
29. ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು
30. ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
31. ಕೆ.ಎಲ್.ಇ. ತಾಂತ್ರಿಕ ವಿಶ್ವವಿದ್ಯಾಲಯ, ಧಾರವಾಡ
32. ಜೆ.ಎಸ್.ಎಸ್.ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು
33. ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು
34. ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು
35. ಬಿ.ಎಲ್.ಡಿ.ಇ. ವಿಶ್ವವಿದ್ಯಾಲಯ, ವಿಜಯಪುರ
36. ಇಂಟರ್‌ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇನ್‌ಫರ್ಮೇಶನ್ ಟೆಕ್ನಾಲಜಿ, ಬೆಂಗಳೂರು
37. ಜಗದ್ಗುರು ಶ್ರೀ ಶಿವರಾತ್ರೀಶ್ವರ ವಿಶ್ವವಿದ್ಯಾಲಯ, ಮೈಸೂರು
38. ಜವಾಹರ್‌ಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್‌ಡ್ ಸೈಂಟಿಫಿಕ್ ರೀಸರ್ಚ್, ಜಕ್ಕೂರು, ಬೆಂಗಳೂರು.
39. ಕೆ.ಎಲ್.ಇ. ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್, ಬೆಳಗಾವಿ
40. ನಿಟ್ಟೆ ವಿಶ್ವವಿದ್ಯಾಲಯ, ಮಂಗಳೂರು
41. ಶ್ರೀ ದೇವರಾಜ ಅರಸ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್, ಕೋಲಾರ
42. ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಅಗಲಕೋಟೆ, ತುಮಕೂರು
43. ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥಾನ, ಗಿಡ್ಡೇನಹಳ್ಳಿ, ಬೆಂಗಳೂರು
44. ಯೆನೆಪೋಯ ವಿಶ್ವವಿದ್ಯಾಲಯ, ದೇರಳಕಟ್ಟೆ, ಮಂಗಳೂರು
45. ಜೈನ್ ವಿಶ್ವವಿದ್ಯಾಲಯ, ಬೆಂಗಳೂರು
46. ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು
47. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಮೆಂಟಲ್ ಹೆಲ್ತ್ ಅಂಡ್ ನ್ಯೂರೋ ಸೈನ್ಸಸ್, ಬೆಂಗಳೂರು
48. ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಮಣಿಪಾಲ
49. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್, ಬೆಂಗಳೂರು.
50. ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು. (ಕರ್ನಾಟಕ ವಿಧಾನ ಮಂಡಲದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಲ್ಯಾಣ ಸಮಿತಿಯ ಅವಗಾಹನೆಗೆ ತರುವುದು)

ಪ್ರತಿ:-

1. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು, ರಾಜಭವನ, ಬೆಂಗಳೂರು.
2. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.